Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 24-06-2022

**ಪತ್ರಿಕಾ ಪ್ರಕಟಣೆ**

## ವಿಟಿಯು ಬೆಳಗಾವಿ ವಿಭಾಗದ ಹ್ಯಾಂಡ್ ಬಾಲ್ ಪಂದ್ಯಾವಳಿ

ಕೆ.ಎಲ್.ಎಸ್ ವಿ.ಡಿ.ಐ.ಟಿ ಹಳಿಯಾಳದಲ್ಲಿ ಜೂನ್ 22 ರಂದು ಜರುಗಿದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಬೆಳಗಾವಿ ವಿಭಾಗ ಮಟ್ಟದ ಅಂತರ್ ಕಾಲೇಜುಗಳ ಪುರುಷರ ಹ್ಯಾಂಡ್ ಬಾಲ್ ಪಂದ್ಯಾವಳಿಯಲ್ಲಿ ಬೆಳಗಾವಿಯ ಜೈನ್ ಇಂಜನಿಯರಿಂಗ್ ಕಾಲೇಜು ತಂಡ ಪ್ರಥಮ ಸ್ಥಾನ ಗಳಿಸಿತು. ಧಾರವಾಡದ ಎಸ್.ಡಿ.ಎಂ ಇಂಜಿನಿಯರಿಂಗ್ ಕಾಲೇಜು ದ್ವಿತೀಯ ಮತ್ತು ಅತಿಥೇಯ ತಂಡ ತೃತೀಯ ಸ್ಥಾನ ಪಡೆಯಿತು.

ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ ಅವರು ವಿಜೇತ ತಂಡಗಳಿಗೆ ಪ್ರಶಸ್ತಿ ವಿತರಿಸಿ ಶುಭ ಹಾರೈಸಿದರು. ಡಾ. ಆರ್. ಎಸ್. ಮುನ್ನೊಳ್ಳಿ, ಡಾ. ಮಹೇಂದ್ರ ದೀಕ್ಷಿತ್, ಮತ್ತು ಶ್ರೀ. ಸುನೀಲ ಯರಗಟ್ಟಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ. ಗದಿಗೆಪ್ಪಾ ಯಳ್ಳೂರ್ ಸ್ವಾಗತಿಸಿದರು. ವಿದ್ಯಾರ್ಥಿಯಾದ ವಿಠ್ಠಲ್ ಗುನಗಾ ನಿರೂಪಿಸಿದರು. ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ನಿಪ್ಪಾಣಿ, ಲಕ್ಷ್ಮೇಶ್ವರ, ರಾಣೆಬೆನ್ನೂರು ಮತ್ತು ಚಿಕ್ಕೋಡಿ ಭಾಗದ ಇಂಜನಿಯರಿಂಗ್ ಕಾಲೇಜು ತಂಡಗಳು ಈ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದವು ಎಂದು ಪ್ರಾಂಶುಪಾಲರಾದ ಡಾ. ವಿ. ಎ. ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal




NITIN
7

